ಜಿಲ್ಲಾಧಿಕಾರಿಗಳು ಹಾಗೂ ಆಡಳಿತಾಧಿಕಾರಿಗಳು, ಮಹಾನಗರ ಪಾಲಿಕೆ, ಕಲಬುರಗಿ ಇವರ ಆದೇಶ ದಿನಾಂಕ: 18–11–2013 ರನ್ವಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳುವ ವರೆಗೆ ಕಾಮಗಾರಿ ನಿರ್ವಹಿಸುತ್ತಿರುವ ಗುತ್ತಿಗೆದಾರರ ನಿರ್ವಹಣಾ ಅವಧಿಯನ್ನು ತಾತ್ಕಾಲಿಕವಾಗಿ ಮುಂದುವರೆಸಿ ದಿನಾಂಕ: 18–11–2013 ರಂದು ಕಾರ್ಯಾದೇಶ ನೀಡಲಾಗಿದೆ. ಸದರಿ ಪ್ಯಾಕೇಜ್‌ಗಳ ನಿರ್ವಹಣೆಗೆ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಆಡಳಿತಾಧಿಕಾರಿಗಳು, ಕಲಬುರಗಿ ಇವರ ಆದೇಶದಂತೆ ದಿನಾಂಕ: 13.01.2014 ರಂದು ಪೌರಾಡಳಿತ ನಿರ್ದೇಶನಾಲಯದಿಂದ ತಾಂತ್ರಿಕ ಮಂಜೂರಾತಿ ಹಾಗೂ ಆಡಳಿತಾತ್ಮಕ ಮಂಜೂರಾತಿಯನ್ನು ಪಡೆದು ರಾಜ್ಯ ಟೆಂಡರ್ ಬುಲೆಟಿನ್‌ನಲ್ಲಿ ದಿನಾಂಕ: 6–2–2014 ರಂದು ಪ್ರಕಟಿಸಿ, ಈ ಕಛೇರಿ ತಿದ್ದುಪಡಿ ಪ್ರಕಟಣೆ ದಿನಾಂಕ: 12–2–2014 ರಂತೆ ರಾಜ್ಯ ಮಟ್ಟದ ಕನ್ನಡ ಮತ್ತು ಆಂಗ್ಲ ಪತ್ರಿಕೆಗಳಲ್ಲಿ ಅಧಿಸೂಚನೆ ಹೊರಡಿಸಲಾಗಿರುತ್ತದೆ ಹಾಗೂ ಇ–ಪ್ರಕ್ಯೂರ್‌ಮೆಂಟ್ ಪೋರ್ಟ್‌ಲ್ ಮೂಲಕ ಟೆಂಡರ್ ಕರೆಯಲಾಗಿರುತ್ತದೆ. ಸದರಿ ಟೆಂಡರ್‌ನಲ್ಲಿ 6 ಜನ ಗುತ್ತಿಗೆದಾರರು ಭಾಗವಹಿಸಿದ್ದು, 5 ಜನ ಗುತ್ತಿಗೆದಾರರ ತಾಂತ್ರಿಕ ಬಿಡ್‌ಗಳು e-procurement ನಲ್ಲಿ ತಿರಸ್ಕೃತಗೊಂಡಿರುತ್ತವೆ. ಬಾಕಿ ಉಳಿದ ಏಕಮಾತ್ರ ಗುತ್ತಿಗೆದಾರರು ತಾಂತ್ರಿಕ ಬಿಡ್‌ನಲ್ಲಿ ಅನರ್ಹಗೊಂಡಿರುತ್ತಾರೆ. ದಿನಾಂಕ: 13.10.2014 ರಂದು ಜರುಗಿದ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಅಂಶ ಸಂಖ್ಯೆ: 7 ರಲ್ಲಿ ಸರ್ಕಾರದ ಅಧಿಸೂಚಿಯಂತೆ ನಗರದ ದಾರಿ ದೀಪಗಳ ನಿರ್ವಹಣೆ ಕಾಮಗಾರಿಯನ್ನು KRIDL ಗೆ ಒಪ್ಪಿಸಲು ನಿರ್ಣಯಿಸಲಾಗಿದೆ. ಪಾಲಿಕೆಯ ಸಾಮಾನ್ಯ ಸಭೆಯ ನಿರ್ಣಯ ದಿನಾಂಕ: 13–10–2014 ರಂತೆ, ಮುಂದಿನ ದಾರಿ ದೀಪಗಳ ನಿರ್ವಹಣೆಯನ್ನು ಸರ್ಕಾರದ ಆದೇಶದಂತೆ, ಕೆ.ಟಿ.ಪಿ.ಪಿ. ಅಧಿನಿಯಮ 1999 ರ ಕಲಂ 4(ಜಿ) ರಡಿ ಕರ್ನಾಟಕ ರೂರಲ್ ಇನ್ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (ಹಿಂದಿನ ಭೂ ಸೇನಾ ನಿಗಮ ನಿಯಮಿತ) ರವರಿಗೆ ವಹಿಸುವಂತೆ ನಿರ್ಣಯ ಮಾಡಲಾಗಿದೆ.

(ಇ) ಉದ್ಭವಿಸುವುದಿಲ್ಲ.

ಅಕ್ರಮ ಮರಳುಗಾರಿಕೆ

1141 (1930) ಶ್ರೀ ದತ್ತಾತ್ರೇಯ ಸಿ. ಪಾಟೀಲ ರೇವೂರ (ಅಪ್ಪು ಗೌಡ)(ಕಲಬುರಗಿ ದಕ್ಷಿಣ) :–ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :

(ಅ) ಕಲಬುರಗಿ ಜಿಲ್ಲೆಯಲ್ಲಿ ಅಕ್ರಮ ಮರಳು ಸಾಗಾಣಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಕ್ರಮ ಮರಳು ಸಾಗಾಣಿಕೆಗೆ ಸಂಬಂಧಿಸಿದಂತೆ ಎಷ್ಟು ಪ್ರಕರಣಗಳು ದಾಖಲಾಗಿವೆ ; (ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಈ ಅಕ್ರಮವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಈ) ಸರ್ಕಾರಿ ಕಾಮಗಾರಿಗಳಿಗೆ ಹಾಗೂ ಸಾರ್ವಜನಿಕರ ಉಪಯೋಗಕ್ಕೆ ಯಾವ ಮಾರ್ಗ ಸೂಚಿಗಳನ್ನು ಅಳವಡಿಸಿ ಮರಳು ಸಾಗಾಣಿಕೆ ಮಾಡಲಾಗುತ್ತಿದೆ ; ಈ ಜಿಲ್ಲೆಯಲ್ಲಿ ಮೋಷಿತ ಮರಳು ಮಾಫೀಯಾವನ್ನು ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :–

(ಅ) ಅಕ್ರಮ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆಯನ್ನು ತಡೆಗಟ್ಟಲು ಕ್ರಮ ಜರುಗಿಸಲಾಗುತ್ತಿದೆ.

(ಆ) 2013–14 ಮತ್ತು 2014–15ನೇ ಸಾಲಿನಲ್ಲಿ ಅಕ್ರಮ ಸಾಗಾಣಿಕೆಗೆ ಸಂಬಂಧಿಸಿದಂತೆ ಒಟ್ಟು 1264 ವಾಹನಗಳಿಗೆ ಒಟ್ಟು ರೂ.78.10 ಲಕ್ಷ ದಂಡ ವಿಧಿಸಿ ಸಂಗ್ರಹಿಸಲಾಗಿದೆ.

(ಇ) ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಗಟ್ಟಲು ಜಿಲ್ಲಾ ಮರಳು ಮಾನಿಟರಿಂಗ್ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪವಿಭಾಗಾಧಿಕಾರಿಗಳ ನೇತೃತ್ವದಲ್ಲಿ ಕಂದಾಯ, ಪೊಲೀಸ್, ಅರಣ್ಯ ಸಾರಿಗೆ, ಪಂಚಾಯತ್ ರಾಜ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ತಾಲ್ಲೂಕು ಮರಳು ಮಾನಿಟರಿಂಗ್ ಸಮಿತಿ ರಚನೆ ಮಾಡಿದ್ದು, ಅಕ್ರಮ ಮರಳು ಗಣಿಗಾರಿಕೆ ನಿಯಂತ್ರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ದಿನಾಂಕ:21.01.2014ರ ಸರ್ಕಾರದ ಅಧಿಸೂಚನೆ ಪ್ರಕಾರ ಕಂದಾಯ, ಅರಣ್ಯ, ಪೊಲೀಸ್ ಮತ್ತು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಅಧಿಕಾರಿಗಳಿಗೆ ಎಂಎಂಡಿಆರ್ 1957 ಹಾಗೂ ಕೆಎಂಎಂಸಿಆರ್ 1994ರ ಪ್ರಕಾರ ದಂಡ ವಿಧಿಸುವ ಮತ್ತು ಎಫ್.ಐ.ಆರ್ ದಾಖಲಿಸುವ ಅಧಿಕಾರವನ್ನು ನೀಡಲಾಗಿದೆ.

(ಈ) 2013–14 ಹಾಗೂ 2014–15ನೇ ಸಾಲಿನಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕ್ರಮವಾಗಿ 19283 ಕ್ಯೂ.ಮೀ ಮತ್ತು 12822 ಕ್ಯೂ.ಮೀ ಮರಳನ್ನು ಸರ್ಕಾರಿ ಕಾಮಗಾರಿಗಳಿಗೆ ಹಾಗೂ ಸಾರ್ವಜನಿಕ ಬಳಕೆಗಾಗಿ ಸರಬರಾಜು ಮಾಡಲಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 24 ಮರಳು ಬ್ಲಾಕ್‌ಗಳನ್ನು ಗುರುತಿಸಲಾಗಿದ್ದು, ಇವುಗಳಲ್ಲಿ 23 ಬ್ಲಾಕ್‌ಗಳಿಗೆ SEIAA ರವರಿಂದ ಪರಿಸರ ಅನುಮತಿ ಪತ್ರ ಪಡೆಯಲಾಗಿದೆ. ಇದರಿಂದ ವಾರ್ಷಿಕವಾಗಿ 252310 ಕ್ಯೂ.ಮೀ. ಪ್ರಮಾಣದ ಮರಳನ್ನು ಸರಬರಾಜು ಮಾಡಬಹುದಾಗಿರುತ್ತದೆ.

ದಿನಾಂಕ: 21.01.2014ರ ಸರ್ಕಾರದ ಅಧಿಸೂಚನೆ ಪ್ರಕಾರ ಕಂದಾಯ, ಅರಣ್ಯ, ಪೊಲೀಸ್ ಮತ್ತು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಎಂಎಂಡಿಆರ್ 1957 ಹಾಗೂ ಕೆಎಂಎಂಸಿಆರ್ 1994ರ ಪ್ರಕಾರ ದಂಡ ವಿಧಿಸುವ ಮತ್ತು ಎಫ್.ಐ.ಆರ್ ದಾಖಲಿಸುವ ಅಧಿಕಾರವನ್ನು ನೀಡಲಾಗಿದೆ.